# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2027 |
| ಸದಸ್ಯರ ಹೆಸರು | : | ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |
| ಉತ್ತರಿಸುವ ದಿನಾಂಕ | : | 24.03.2021 |

********

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹನೂರು ತಾಲ್ಲೂಕಿನಲ್ಲಿ ತಾಲ್ಲೂಕು ಆಡಳಿತವನ್ನು ಸುಗಮಗೊಳಿಸಲು ತಾಲ್ಲೂಕು ಮಟ್ಟದ ಎಲ್ಲಾ ಕಚೇರಿಗಳೂ ಒಂದೆಡೆ ಇರುವಂತೆ, ಮಿನಿ ವಿಧಾನಸೌಧ ನಿರ್ಮಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ; | ಹೌದು |
| ಆ) | ಈ ಪ್ರಸ್ತಾವನೆಗೆ ಸರ್ಕಾರದ ಅನುಮೋದನೆ ದೊರಕಿದೆಯೇ; ಮಿನಿ ವಿಧಾನಸೌಧ ನಿರ್ಮಾಣದ ಅಂದಾಜು ವೆಚ್ಚ ಎಷ್ಟು; ಯಾವ ಕಾಲಮಿತಿಯಲ್ಲಿ ಈ ಮಿನಿ ವಿಧಾನಸೌಧ ನಿರ್ಮಾಣ ಕಾಮಗಾರಿಯನ್ನು ಆರಂಭಿಸಲಾಗುವುದು; | ಹನೂರು ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ನಿರ್ಮಿಸಲು ಹನೂರು ಹೋಬಳಿ, ಹುಲ್ಲೇಪುರ ಗ್ರಾಮದ ಸ.ನಂ.312/ಡಿ ರಲ್ಲಿ ವಿಸ್ತೀರ್ಣ 7.76 ಎಕರೆ ಮತ್ತು 312/ಇ ರಲ್ಲಿ 1.17 ಎಕರೆ ವಿಸ್ತೀರ್ಣ ಒಟ್ಟು 8.93 ಎಕರೆ ಜಮೀನನ್ನು ಗುರುತಿಸಲಾಗಿದ್ದು, ಸದರಿ ಜಮೀನಿನಲ್ಲಿ ಕಟ್ಟಡ ಕಾಮಗಾರಿಯನ್ನು ರೂ.10.00 ಕೋಟಿಗಳ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಸವಿವರ ಅಂದಾಜು ಪಟ್ಟಿ ಮತ್ತು ನಕ್ಷೆಯೊಂದಿಗೆ ಪ್ರಸ್ತಾವನೆ ಸ್ವೀಕೃತವಾಗಿದ್ದು, ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಪರಿಶೀಲನೆಯಲ್ಲಿದೆ. |
| ಇ) | ಚಾಮರಾಜನಗರ ಜಿಲ್ಲೆಯಲ್ಲಿ ಒಂದೇ ರೆವಿನ್ಯೂ ಉಪವಿಭಾಗವಿದ್ದು, ಸಾರ್ವಜನಿಕ ಆಡಳಿತದ ಹಿತದೃಷ್ಟಿಯಿಂದ ಚಾಮರಾಜನಗರದಲ್ಲಿ ಇನ್ನೊಂದು ಉಪವಿಭಾಗವನ್ನು ರಚಿಸಲು ಕ್ರಮ ತೆಗೆದುಕೊಳ್ಳಲಾಗುವುದೇ? | ಚಾಮರಾಜನಗರ ಜಿಲ್ಲೆಯಲ್ಲಿ ಮತ್ತೊಂದು ಉಪ ವಿಭಾಗ ಕಛೇರಿ ತೆರೆಯುವ ಬಗ್ಗೆ ಜಿಲ್ಲಾಧಿಕಾರಿ ಚಾಮರಾಜನಗರ ಇವರಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು ಪರಿಶೀಲನೆಯಲ್ಲಿದೆ. |

ಕಂಇ 47 ಡಬ್ಲ್ಯೂಬಿಆರ್ 2021

(ಆರ್. ಅಶೋಕ)
ಕಂದಾಯ ಸಚಿವರು